## ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.1187/2021

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಶಾಂತಕುಮಾರ್ | ಸಿಡಬ್ಲ್ಯೂ-4 |
| ತಂದೆಯ ಹೆಸರು | – | ಕೃಷ್ಣಪ್ಪ | ಪಿಡಬ್ಲ್ಯೂ-3 |
| ವಯಸ್ಸು | – | 36 ವರ್ಷ | |
| ಉದ್ಯೋಗ | – | ವ್ಯವಸಾಯ | |
| ವಾಸ | – | ಗೋಕುಲ ನಗರ | |

**ದಿನಾಂಕಃ29.07.2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ಚಾಸಾ.1 ಮತ್ತು 5 ನನಗೆ ಪರಿಚಯವಿಲ್ಲ. ಸಾಕ್ಷಿಗೆ ನಿಪಿ-3 ಮತ್ತು 4 ನ್ನು ತೋರಿಸಲಾಗಿ ಅದರಲ್ಲಿರುವ ಸಹಿ ಒಪ್ಪಿದ್ದರಿಂದ ಸಹಿಗಳನ್ನು ನಿಪಿ-3(ಬಿ), 4(ಬಿ) ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಪೊಲೀಸರು ಯಾವುದೇ ವಾಹನ ಅಮಾನತ್ತು ಪಡಿಸಿಕೊಂಡಿಲ್ಲ. ನನ್ನ ಜೊತೆ ಸದರಿ ದಾಖಲೆಗಳಿಗೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-3 ಮತ್ತು 4 ರಲ್ಲಿ ಏನು ಬರೆಯಲಾಗಿದೆ ಎಂದು ಗೊತ್ತಿಲ್ಲ. ಅವುಗಳನ್ನು ಪೊಲೀಸರು ಓದಿ ಹೇಳಿಲ್ಲ. ಸಾಕ್ಷಿ ನಿಪಿ-5 ರ ಪೋಟೋವನ್ನು ನೋಡಿ ಗುರುತಿಸಿದ್ದಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

ದಿಃ03.10.2023 ರಂದು ಯಲ್ಲದಕೆರೆ ಬಸ್ ನಿಲ್ದಾಣದ ಬಳಿ ಅಪಘಾತಕ್ಕೆ ಸಂಬಂಧಪಟ್ಟಂತೆ ಪೊಲೀಸರು ಮಹಜರ್ ಮಾಡಿ ಎಪಿ.39 ಬಿ ಜಡ್ 4826 ನ್ನು ವಶಪಡಿಸಿಕೊಂಡು ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಮಹಜರ್ ಮಾಡುವಾಗ ನಿಪಿ-5 ನ್ನು ತೆಗೆಸಿದ್ದಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ನಿಪಿ-3 ಮತ್ತು 4 ನ್ನು ತಯಾರಿಸಿದ್ದಾರೆ

ಎಂದರೆ ಸರಿಯಲ್ಲ. ಎಲ್ಲಾ ವಿಚಾರ ನನಗೆ ಗೊತ್ತಿದ್ದರೂ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಆರ್ ಟಿ ಎಸ್ ವಕೀಲರಿಂದ–ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು